91 (198) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ (ಕಾಲೇಜು) ವಿದ್ಯಾರ್ಥಿನಿ ನಿಲಯದ ಕಟ್ಟಡ ನಿರ್ಮಾಣವು ಅಪೂರ್ಣವಾಗಿದ್ದು ಅದನ್ನು ಯಾವಾಗ ಪೂರ್ಣಗೊಳಿಸಿ ಅನುಕೂಲ ಮಾಡಿಕೊಡಲಾಗುವುದು;

ಆ) ಪ್ರಸ್ತುತ ಇರುವ ವಿದ್ಯಾರ್ಥಿನಿ ಹಾಸ್ಟೆಲ್‌ನಲ್ಲಿ 50 ವಿದ್ಯಾರ್ಥಿನಿಯರಿಗೆ ಮಾತ್ರ ಸ್ಥಳಾವಕಾಶವಿದ್ದು, ಆದರೆ ಅದರಲ್ಲಿ 95 ವಿದ್ಯಾರ್ಥಿನಿಯರಿಗೆ ಅವಕಾಶ ಮಾಡಿಕೊಟ್ಟಿರುವುದು ನಿಜವೆ;

ಇ) ಹಾಗಿದ್ದಲ್ಲಿ, ಈ ವ್ಯವಸ್ಥೆಗೆ ಪರಿಹಾರಕ್ಕಾಗಿ ಅಪೂರ್ಣಗೊಂಡ ಕಟ್ಟಡವನ್ನು ಪೂರ್ಣಗೊಳಿಸಲು ತ್ವರಿತ ಕ್ರಮಗಳನ್ನು ಕೈಗೊಳ್ಳಲಾಗುವುದೆ?

ಶ್ರೀ ಬಾಲಚಂದ್ರ ಎಲ್. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು):

ಅ) ಈ ಕಟ್ಟಡ ಅಪೂರ್ಣವಾಗಿಲ್ಲ ಸದರಿ ವಿದ್ಯಾರ್ಥಿ ನಿಲಯಕ್ಕೆ ರೂ. 15.28 ಲಕ್ಷ ಅಂದಾಜು ವೆಚ್ಚದಲ್ಲಿ ದಕ್ಷಿಣ ಕನ್ನಡ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಗಳೂರು ಇವರ ಮುಖಾಂತರ ಕಟ್ಟಡವನ್ನು ನಿರ್ಮಿಸಲಾಗಿರುತ್ತದೆ. ಕಟ್ಟಡವನ್ನು ಅಂದಾಜು ಪಟ್ಟಿಯ ಪ್ರಕಾರ ಪೂರ್ಣಗೊಳಿಸಲಾಗಿರುತ್ತದೆ. ಈ ಕಟ್ಟಡದಲ್ಲಿ ದಿನಾಂಕ: 03-10-2000 ದಿಂದ ವಿದ್ಯಾರ್ಥಿ ನಿಲಯವನ್ನು ನಡೆಸಲಾಗುತ್ತಿದೆ.

ಆ) ಹೌದು. ನಿಲಯದ ಮಂಜೂರಾತಿ ಸಂಖ್ಯಾಬಲ 95 ಇದ್ದು ಅದರಂತೆ ಪ್ರವೇಶ ಅವಕಾಶ ನೀಡಲಾಗಿದೆ.

ಇ) ಈ ನಿಲಯಕ್ಕೆ 10 ಕೊಠಡಿಗಳನ್ನು ಹೆಚ್ಚುವರಿಯಾಗಿ ನಿರ್ಮಿಸುವ ಉದ್ದೇಶವಿದ್ದು ಜಿಲ್ಲಾ ಪಂಚಾಯತ್ ಹಂತದಲ್ಲಿ ಪರಿಶೀಲನೆಯಲ್ಲಿದೆ.

92 (199) ಶ್ರೀ ಪ್ರಭಾಕರ್ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಮತ್ತು ನಂತರದ ಎಷ್ಟು ವಿದ್ಯಾರ್ಥಿನಿಯರ ನಿಲಯಗಳು ಕಾರ್ಯ ನಿರ್ವಹಿಸುತ್ತಿವೆ;

ಆ) ಮಹಿಳಾ ಶಿಕ್ಷಣಕ್ಕೆ ಆದ್ಯತೆ ನೀಡುವ ದಿಶೆಯಲ್ಲಿ ವಿದ್ಯಾರ್ಥಿನಿ ನಿಲಯಗಳನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ ಈ ಕುರಿತು ಸರ್ಕಾರದ ಕಾರ್ಯ ಯೋಜನೆಗಳೇನು;

ಈ) ಜಿಲ್ಲೆಯಲ್ಲಿ ನೂತನವಾಗಿ ಪ್ರಾರಂಭಿಸಲಾಗುವ ಹಿಂದುಳಿದ ವರ್ಗಗಳ ವಿವಿಧ ವಿದ್ಯಾರ್ಥಿ ನಿಲಯಗಳ ತಾಲ್ಲೂಕುವಾರು ವಿವರಗಳೇನು?

ಶ್ರೀ ಬಾಲಚಂದ್ರ ಎಲ್. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು):

ಅ) ಹಿಂದುಳಿದ ವರ್ಗಗಳ ಇಲಾಖೆಯಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 09 ಮೆಟ್ರಿಕ್ ಪೂರ್ವ ಹಾಗೂ 07 ಮೆಟ್ರಿಕ್ ನಂತರದ ಒಳಗೆ ಒಟ್ಟು 16 ಬಾಲಕಿಯರ ನಿಲಯಗಳು ಕಾರ್ಯ ನಿರ್ವಹಿಸುತ್ತಿವೆ.

ಆ) 2005–06ನೇ ಸಾಲಿನಲ್ಲಿ ಹೊಸ ವಿದ್ಯಾರ್ಥಿ ನಿಲಯಗಳನ್ನು ದಕ್ಷಿಣ ಕನ್ನಡ ಜಿಲ್ಲೆಗೆ ಮಂಜೂರು ಮಾಡಿರುವುದಿಲ್ಲ.

ಇ) ಮುಂದಿನ ಸಾಲಿನಲ್ಲಿ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡುವಾಗ ಹೆಣ್ಣು ಮಕ್ಕಳ ನಿಲಯಗಳಿಗೆ ಅದರಂತೆ ನೀಡಲಾಗುವುದು.

ಈ) ದಕ್ಷಿಣ ಕನ್ನಡ ಜಿಲ್ಲೆಗೆ ಹೊಸ 27 ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು ಹಾಗೂ 12 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಮಂಜೂರಾಗಿರುವ ಬೇಡಿಕೆ ಇರುತ್ತದೆ. 2006–07ನೇ ಸಾಲಿನಲ್ಲಿ ಹೊಸ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡುವ ಸಮಯದಲ್ಲಿ ಆಯವ್ಯಯದ ಲಭ್ಯತೆಯನ್ನು ಆಧರಿಸಿ ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುವುದು.

93 (200) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳ್ತಂಗಡಿ (ದ.ಕ) ಯಲ್ಲಿರುವ ಸಮುದಾಯ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಸಂಬಂಧವಾಗಿ ಸರ್ಕಾರದ ಕ್ರಮಗಳೇನು;

ಆ) ತಾಲ್ಲೂಕು ಮುಖ್ಯ ಕೇಂದ್ರದಲ್ಲಿರುವ ಈ ಸಮುದಾಯ ಆರೋಗ್ಯ ಕೇಂದ್ರವನ್ನು ಕೂಡಲೇ ಮೇಲ್ದರ್ಜೆಗೇರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಧರ್ಮಸ್ಥಳದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಸಂಬಂಧದ ಪ್ರಸ್ತಾವನೆ ಯಾವ ಹಂತದಲ್ಲಿದೆ;

ಈ) ಈ ಸಂಬಂಧವಾಗಿ ತ್ವರಿತ ಕ್ರಮಗಳನ್ನು ಕೈಗೊಳ್ಳಲು ಸರ್ಕಾರವು ಮುಂದಾಗುವುದೇ;

ಉ) ಬೆಳ್ತಂಗಡಿ ತಾಲ್ಲೂಕಿನ ನಾರಾವಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಬಹಳ ವರ್ಷಗಳಿಂದಲೂ ವೈದ್ಯಾಧಿಕಾರಿಗಳ ಹುದ್ದೆಯು ಖಾಲಿ ಇದ್ದು, ಗ್ರಾಮಾಂತರದ ಜನರಿಗೆ ವೈದ್ಯಕೀಯ ಸೇವೆಯಲ್ಲಿ ಆಗುತ್ತಿರುವ ಅನಾನುಕೂಲವನ್ನು ಸರಿಪಡಿಸುವುದಕ್ಕಾಗಿ ವೈದ್ಯರನ್ನು ನೇಮಕ ಮಾಡಲು ಸಕಾಲಿಕ ಕ್ರಮ ಕೈಗೊಳ್ಳುವುದೇ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಪರಿಶೀಲನೆಯಲ್ಲಿದೆ.

ಆ) ಮಾರ್ಗಸೂಚಿ ಪ್ರಕಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಇ) ಪರಿಶೀಲನೆಯ ಹಂತದಲ್ಲಿದೆ.

ಈ) ಪರಿಶೀಲನೆಯ ಹಂತದಲ್ಲಿದೆ.

ಉ) ಬೆಳ್ತಂಗಡಿ ತಾಲ್ಲೂಕಿನ ನಾರಾವಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ದಿನಾಂಕ: 17–2–06ರಂದು ವೈದ್ಯಾಧಿಕಾರಿಗಳು ಹಾಜರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

94 (201) ಶ್ರೀ ಪ್ರಭಾಕರ್ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಮಾಲಾಡಿ ಎಂಬಲ್ಲಿ ಕೈಗಾರಿಕಾ ತರಬೇತಿ ಕೇಂದ್ರವನ್ನು ಪ್ರಾರಂಭಿಸಿ ಎಷ್ಟು ವರ್ಷಗಳಾಗಿವೆ;